ತೆಗೆದುಕೊಳ್ಳಿ. ಅಜೆಂಡಾದಲ್ಲಿರುವ ಒಂದಾದರೆ ಚರ್ಚೆಯ ವಿಷಯ ಬೇರೆ ತೆಗೆದುಕೊಳ್ಳುವುದು ಸರಿಯಾಗುವುದಿಲ್ಲ.

3. ಸಭೆಯ ಮುಂದಿಡಲಾದ ಕಾಗದಪತ್ರಗಳು

ಶ್ರೀ ಎಸ್.ಬಿ.ಪಾಟೀಲ್: ಅಪರಕಾರ್ಯದರ್ಶಿಗಳು: ಕರ್ನಾಟಕ ವಿಧಾನಸಭೆ: ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತವಾದ ಆದರೆ ವಿಧಾನ ಪರಿಷತ್ತಿನ ಸಹಮತಿ ದೊರೆಯದೇ ಹಿಂದಿರುಗಿಸಲಾದ 2005ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುತ್ತೇನೆ. (ಅನುಬಂಧ–1)

ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು)

I. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿ) ಅವರು ಪರವಾಗಿ ಮಾನ್ಯ ಅಧ್ಯಕ್ಷರೆ, ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಮೇರೆಗೆ :

1. ನ್ಯಾಯಮೂರ್ತಿ ಎ.ಜೆ. ಸದಾಶಿವ ವಿಚಾರಣಾ ಆಯೋಗ (ಸೂರತ್ಕಲ್ ಗಲಭೆ) ಬೆಂಗಳೂರು ವರದಿ. (ಸಂಪುಟ 1 ಮತ್ತು 2ನ್ನು ಒಳಗೊಂಡಿದೆ)

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ :

1. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 2003–04ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

II ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು) ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿ) ಅವರ ಪರವಾಗಿ :– ಮಾನ್ಯ ಅಧ್ಯಕ್ಷರೆ, 1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ.

2. ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

III ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು): ಶ್ರೀ ಸಿ. ಚನ್ನಿಗಪ್ಪ (ಅರಣ್ಯ ಮತ್ತು ಪರಿಸರ ಸಚಿವರು) ಅವರ ಪರವಾಗಿ:– ಮಾನ್ಯ ಅಧ್ಯಕ್ಷರೆ, 1974ರ ಮಾಲಿನ್ಯ ನಿಯಂತ್ರಣ ಕಾಯ್ದೆ ಕಂಡಿಕೆ 40(7)ರ ಮೇರೆಗೆ :

1. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ 2004–05ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು)

iv) ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು) ಅವರ ಪರವಾಗಿ:– – ಮಾನ್ಯ ಅಧ್ಯಕ್ಷರೆ, 1973ರ ಕರ್ನಾಟಕ ಕೊಳಚೆ ನಿರ್ಮೂರ್ಲನಾ ಮಂಡಳಿ ಅಧಿನಿಯಮ 19(3)ರ ಮೇರೆಗೆ:

1. ಕರ್ನಾಟಕ ಕೊಳಚೆ ನಿರ್ಮೂರ್ಲನಾ ಮಂಡಳಿ, ಬೆಂಗಳೂರಿನ 2004–05ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಎಂ.ಪಿ. ಪ್ರಕಾಶ್ (ಮಾನ್ಯ ಸಚಿವರು) :

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) ಅವರ ಪರವಾಗಿ: ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಅಧಿನಿಯಮದ 50(2) ರ ಮೇರೆಗೆ :

1. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಜ್ಞಾನ ಸಂಗಮ ಬೆಳಗಾವಿಯ 2004–05ನೇ ಸಾಲಿನ ವಾರ್ಷಿಕ ವರದಿ.

2. ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದ 2002–03ನೇ ಸಾಲಿನ ಲೆಕ್ಕಪರಿಶೋಧನೆಯ ಅನುಸರಣಾ ವರದಿ

3. ಗುಲ್ಬರ್ಗಾ ವಿಶ್ವವಿದ್ಯಾಲಯದ 2003–04ನೇ ಸಾಲಿನ ಲೆಕ್ಕಪರಿಶೋದನಾ ವರದಿ ಹಾಗೂ ಅನುಸರಣಾ ವರದಿಗಳನ್ನು ಮಂಡಿಸುತ್ತಿದ್ದೇನೆ.

VI. ಶ್ರೀ ಎನ್. ಚೆಲುವರಾಯಸ್ವಾಮಿ (ಸಾರಿಗೆ ಸಚಿವರು) ಅವರು: ಮಾನ್ಯ ಅಧ್ಯಕ್ಷರೆ,

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 1950ರ ಅಧಿನಿಯಮ 33(2), 35ರ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ 2003–04ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತಿದ್ದೇನೆ.

vii) ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:- ಮಾನ್ಯ ಅಧ್ಯಕ್ಷರೆ,

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262 (3)ನೇ ಮತ್ತು 300 (5)ನೇ ಪ್ರಕರಣದ ಮೇರೆಗೆ :

1. ವಿಜಾಪುರ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಗಳು.

2. ರಾಯಚೂರು ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿ.

3. ಬೆಳಗಾವಿ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

4. ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ಲೆಕ್ಕ ತಪಾಸಣಾ ವರದಿ.

5. ಉಡುಪಿ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ಲೆಕ್ಕಗಳು ಮತ್ತು ಲೆಕ್ಕಪರಿಶೋಧನಾ ವರದಿ.

6. ಗುಲ್ಬರ್ಗಾ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು

7. ಮಂಡ್ಯ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿ.

8. ಬೀದರ್ ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

9. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

VIII. ಶ್ರೀ ಬಂಡೆಪ್ಪ ಕಾಶೆಂಪೂರ್ (ಕೃಷಿ ಸಚಿವರು) ಅವರು: ಮಾನ್ಯ ಅಧ್ಯಕ್ಷರೆ,

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ ;

1. ಕರ್ನಾಟಕ ಅಗ್ರೋ ಇಂಡಸ್ಟ್ರೀಸ್ ಕಾರ್ಪೊರೇಷನ್ ನಿಯಮಿತದ 2003–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಎಲ್ಲಾ ವರದಿಗಳನ್ನು ಮಂಡಿಸಲಾಯಿತು.